ಮಂಜೂರಾದ ರಾಷ್ಟ್ರೀಯ ಹೆದ್ದಾರಿಗಳ ಉದ್ದ.

352-ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನಮ್ಮ ರಾಜ್ಯಕ್ಕೆ ಭಾರತ ಸರ್ಕಾರದಿಂದ ಇತ್ತೀಚೆಗೆ ಮಂಜೂರಾದ ರಾಷ್ಟ್ರೀಯ ಹೆದ್ದಾರಿಗಳ ಒಟ್ಟು ಉದ್ದ ಎಷ್ಟು (ಕಿ.ಮೀ. ಗಳಲ್ಲಿ)*

ಆ) *ಬೈಪಾಸ್ ರಸ್ತೆಗಳು ಸೇರಿದಂತೆ ರಸ್ತೆಗಳ ಅಂದಾಜು ವೆಚ್ಚವೆಷ್ಟು?*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಯಾವುದೂ ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಸೂಳೆಕೋಟಿ ಹತ್ತಿರ ಸೇತುವೆ ಕೆಲಸ

451-ಶ್ರೀ ಕೆ.ಎಸ್. ಕಾಳಮರಿಗೌಡ (ಪಿರಿಯಾಪಟ್ಟಣ): ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪಿರಿಯಾಪಟ್ಟಣ ತಾಲ್ಲೂಕಿನ ಸೂಳೆಕೋಟಿ ಹತ್ತಿರ ಒಂದು ಸೇತುವೆ ಕಟ್ಟಲು ಮಂಜೂರಾಗಿದ್ದು ಸುಮಾರು 20 ಲಕ್ಷ ರೂ.ಗಳು ಖರ್ಚಾಗಿದ್ದು ಇನ್ನೂ ಅರ್ಧ ಕೆಲಸ ಹಾಗೆಯೇ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದರೆ ಅದಕ್ಕೆ ಕಾರಣಗಳೇನು? ಮತ್ತು ಅದನ್ನು ಯಾವಾಗ ಪೂರೈಸಲಾಗುವುದು?*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಮಂತ್ರಿಗಳು):

ಅ) ಬಂದಿದೆ.

ಆ) ಜಿಲ್ಲಾಪರಿಷತ್‌ಗೆ ಈ ಕೆಲಸವನ್ನು 1987ರಲ್ಲಿ ಹಸ್ತಾಂತರಿಸಿದ್ದು, ಸಾಕಷ್ಟು ಅನುದಾನವಿಲ್ಲದಿದ್ದ ಕಾರಣ ಹಾಗೂ ಕೂಡುರಸ್ತೆಯ ಭೂ ಸ್ವಾಧೀನದಲ್ಲಿ ವಿಳಂಬವಾದುದರಿಂದ ಸೇತುವೆಯ ಕಾರ್ಯವನ್ನು ಮುಂದುವರೆಸಿರಲಿಲ್ಲ. ಜಿಲ್ಲಾ ಪರಿಷತ್‌ನಿಂದ ಈ ದೊಡ್ಡ ಮೊತ್ತದ ಕಾಮಗಾರಿಯನ್ನು ನಿರ್ವಹಿಸುವುದು ಸಾಧ್ಯವಿಲ್ಲವೆಂಬುದನ್ನು ಉನ್ನತಾಧಿಕಾರ ಸಮಿತಿಯು ನಿರ್ಣಯಿಸಿ ದಿನಾಂಕ 12.6.91 ರಲ್ಲಿ ಲೋಕೋಪಯೋಗಿ ಇಲಾಖೆಗೆ ವಹಿಸಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ನಿರ್ಮಾಣ ನಿಗಮದವರಿಗೆ ಕಾಮಗಾರಿಯನ್ನು 91-92ರಲ್ಲಿ ವಹಿಸಲಾಗಿದ್ದು, ಅನುದಾನವನ್ನು ಅನುಸರಿಸಿ 93-94ರ ಅವಧಿಯಲ್ಲಿ ಪೂರ್ಣಗೊಳಿಸುವ ಕಾರ್ಯಕ್ರಮವಿದೆ.

ತ್ಯಾಮಗೊಂಡ್ಲು ಕಳಪಟ್ಟ ರಸ್ತೆಯಲ್ಲಿರುವ ಕಾಸ್‌ವೇ ನಿರ್ಮಾಣ ಕಾರ್ಯ.

68-ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನೆಲಮಂಗಲ ತಾಲ್ಲೂಕು ತ್ಯಾಮಗೊಂಡ್ಲು ಕೆಳಪಟ್ಟ ರಸ್ತೆಲ್ಲಿರುವ ಕಾಸ್ ವೇ ಬಹಳ ದಿನಗಳಿಂದ ನಿರ್ಮಾಣವಾಗದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರದಿಂದ ತೆಗೆದುಕೊಂಡ ಕ್ರಮವೇನು?*

ಇ) *ಈ ಕಾಮಗಾರಿಯನ್ನು ಪ್ರಾರಂಭಿಸಲು ಎಷ್ಟು ಕಾಲಾವಕಾಶ ಬೇಕಾಗುವುದು?*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):